# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 94 |
| ಸದಸ್ಯರ ಹೆಸರು | : | ಡಾ: ಕೆ.ಗೋವಿಂದರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ರಾಜ್ಯದ 11 ಸಾವಿರ ಶಾಲೆಗಳು ಕುಡಿಯುವ ನೀರು, ಶೌಚಾಲಯ ಉತ್ತಮ ಕಾಂಪೌಂಡ್, ವಿದ್ಯುತ್ ಸೇರಿದಂತೆ ಹಲವು ಮೂಲ ಸೌಕರ್ಯಗಳಿಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಗಳ ನಿವಾರಣೆಗೆ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ:<br>(ವಿವರಗಳನ್ನು ನೀಡುವುದು) | ಬಂದಿದೆ.<br>ರಾಜ್ಯದಲ್ಲಿ ಒಟ್ಟು 47283 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ. ಇದರಲ್ಲಿ 46339 ಶಾಲೆಗಳಿಗೆ ವಿದ್ಯುತ್ ವ್ಯವಸ್ಥೆ ಮತ್ತು 42112 ಶಾಲೆಗಳಿಗೆ ಉತ್ತಮ ಕಾಂಪೌಂಡ್ ಸೌಲಭ್ಯವಿದೆ.<br>ಕಳೆದ ಮೂರು ವರ್ಷಗಳಲ್ಲಿ, ರಾಜ್ಯವಲಯ ಮುಂದುವರೆದ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮೂಲಭೂತ ಸೌಲಭ್ಯಗಳಿಗಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿದೆ.<br>• 2019-20ನೇ ಸಾಲಿನಲ್ಲಿ ಆರ್.ಐ.ಡಿ.ಎಫ್-25 ಅಡಿಯಲ್ಲಿ ಅಧಿಕ ಮಳೆಯಿಂದ ಹಾನಿಯಾದ 3386 ಸರ್ಕಾರಿ ಶಾಲೆಗಳ 6469 ಕೊಠಡಿಗಳ ಮರು ನಿರ್ಮಾಣಕ್ಕಾಗಿ ರೂ.75807.30 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿದೆ.<br>• 2019-20 ನೇ ಸಾಲಿನಲ್ಲಿ ಮಳೆಯಿಂದ ಹಾನಿಗೊಳಗಾದ 6196 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 13260 ಕೊಠಡಿಗಳ ದುರಸ್ಥಿಗೆ ರೂ.19951.75 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.<br>• 2020-21ನೇ ಸಾಲಿನಲ್ಲಿ ರಾಜ್ಯದ 1007 ಸರ್ಕಾರಿ ಶಾಲೆಗಳಲ್ಲಿ 1483 ಕೊಠಡಿಗಳ ನಿರ್ಮಾಣಕ್ಕಾಗಿ ಒಟ್ಟು ರೂ.18000.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದೆ.<br>• 2020-21ನೇ ಸಾಲಿನಲ್ಲಿ ರಾಜ್ಯದ 187 ಸರ್ಕಾರಿ ಶಾಲೆಗಳ ಕೊಠಡಿಗಳ ದುರಸ್ತಿಗಾಗಿ ಒಟ್ಟು ರೂ.476.11 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದೆ.<br>• 2020-21ನೇ ಸಾಲಿನಲ್ಲಿ ಶಾಲೆಗಳಿಗೆ ಅವಶ್ಯವಿರುವ ಶೌಚಾಲಯ, ಆಟದ ಮೈದಾನ, ಅಡುಗೆ ಕೋಣೆ ಮತ್ತು ಕೈತೋಟ ನಿರ್ಮಾಣಕ್ಕಾಗಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಅನುದಾನ ಒಗ್ಗೂಡಿಸುವಿಕೆಯ ಮೂಲಕ ರೂ.2920.99 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಿದೆ. |

| | | |
|---|---|---|
| | | • ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದ ಆದೇಶದಂತೆ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದಿಂದ 2019-20ನೇ ಸಾಲಿನ ಆಯವ್ಯಯದಲ್ಲಿ ವಿವಿಧ ಕಾಮಗಾರಿಗಳಿಗೆ ಒಟ್ಟು ರೂ.8826.95 ಲಕ್ಷಗಳ ಅನುದಾನ ಒದಗಿಸಲಾಗಿದೆ.<br>• 2020-21ನೇ ಸಾಲಿನ ಆಯವ್ಯಯ ಘೋಷಣೆಯಂತೆ 50 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ತಲಾ ರೂ.2.00 ಕೋಟಿಯಂತೆ ಮೂಲಭೂತ ಸೌಕರ್ಯ ಒದಗಿಸಲು ಒಟ್ಟು ರೂ.100.00 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2021-22ನೇ ಸಾಲಿನ ಆಯವ್ಯಯ ಘೋಷಣೆಯಂತೆ 50 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ತಲಾ ರೂ.2.00 ಕೋಟಿಯಂತೆ ಮೂಲಭೂತ ಸೌಕರ್ಯ ಒದಗಿಸಲು ಒಟ್ಟು ರೂ.100.00ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2021-22ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ರೂ.60.00ಕೋಟಿ ಅನುದಾನವನ್ನು ಹಿಂದುಳಿದ 114 ತಾಲ್ಲೂಕುಗಳಲ್ಲಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗಳಿಗಾಗಿ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2021-22ನೇ ಸಾಲಿನಲ್ಲಿ ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸವಿನೆನಪಿಗಾಗಿ ಅಮೃತ ಶಾಲಾ ಸೌಲಭ್ಯ ಯೋಜನೆಯಡಿ ಆಯ್ದ 750 ಶಾಲೆಗಳಿಗೆ ದುರಸ್ಥಿ, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯ ಇತ್ಯಾದಿ ಸಮಗ್ರ ಸೌಲಭ್ಯ ಒದಗಿಸಲು ತಲಾ ರೂ.10.00ಲಕ್ಷಗಳಂತೆ ರೂ.75.00ಕೋಟಿಗಳ ಅನುದಾನ ಒದಗಿಸಲಾಗಿದೆ.<br>• 2021-22ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ 3500.00ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. 3500.00ಲಕ್ಷ ರೂಗಳ ಅನುದಾನ ಬಿಡುಗಡೆ ಮಾಡಲಾಗಿದೆ<br>• ಪ್ರತಿ ವರ್ಷದಲ್ಲಿ ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2020-21ನೇ ಸಾಲಿನಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತುರ್ತು ದುರಸ್ಥಿಗೆ ರೂ.7557.99 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.<br>• 2021-22ನೇ ಸಾಲಿನಲ್ಲಿ ರಾಜ್ಯ ವಲಯ ಯೋಜನೆಯಡಿ ಶಾಲಾ ಕೊಠಡಿಗಳ ನಿರ್ಮಾಣ ಮತ್ತು ದುರಸ್ಥಿ, ಶೌಚಾಲಯ |

| | | |
|---|---|---|
| | | ನಿರ್ಮಾಣ ಮತ್ತು ದುರಸ್ತಿ ಹಾಗೂ ನಿರ್ವಹಣಾ ವೆಚ್ಚಗಳಿಗೆ ಮತ್ತು ಅಗತ್ಯ ಮೂಲಭೂತ ಸೌಲಭ್ಯಗಳಿಗಾಗಿ ಒಟ್ಟು ರೂ. 67125.41 ಲಕ್ಷಗಳ ಅನುದಾನವನ್ನು ರಾಜ್ಯದ ಜಿಲ್ಲಾ ಅಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.<br>• 2021–22ನೇ ಸಾಲಿನ ಆಯವ್ಯಯ ಘೋಷಣೆಯಂತೆ 2021–22 ಹಾಗೂ 2022–23ನೇ ಸಾಲಿನಲ್ಲಿ ಸರ್ಕಾರಿ ಶಾಲಾ–ಕಾಲೇಜುಗಳಿಗೆ ಪಿಠೋಪಕರಣಗಳನ್ನು ಒದಗಿಸಲು ಒಟ್ಟು ರೂ.100.00ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2022–23ನೇ ಸಾಲಿನಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಟ್ಟು ರೂ.135.00ಕೋಟಿಗಳ ಅನುದಾನ ಒದಗಿಸಲಾಗಿದೆ.<br>• 2022–23ನೇ ಸಾಲಿನಲ್ಲಿ ರಾಜ್ಯ ವಲಯ ಯೋಜನೆಯಡಿ 155 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲೆಗಳ ತುರ್ತು ದುರಸ್ಥಿಗಾಗಿ ರೂ.46.50ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br>• 2022–23ನೇ ಸಾಲಿನಲ್ಲಿ ರಾಜ್ಯ ವಲಯ ಮುಂದುವರೆದ ಕಾರ್ಯಕ್ರಮದ ವಿವೇಕ ಯೋಜನೆಯಡಿ ಅಂದಾಜು ರೂ.990.00ಕೋಟಿ ವೆಚ್ಚದಲ್ಲಿ 6601 ಶಾಲಾ ಕೊಠಡಿಗಳ ನಿರ್ಮಾಣ ಮಾಡಲು ಅಗತ್ಯ ಕ್ರಮ ವಹಿಸಲಾಗಿದೆ.<br>• ದಿನಾಂಕ:15.08.2022ರಂದು ದೇಶದ 76ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಮಾನ್ಯ ಮುಖ್ಯಮಂತ್ರಿಗಳ ಘೋಷಣೆಯನ್ವಯ "ರಾಜ್ಯದ ಎಲ್ಲಾ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಲ್ಲಿ ಶೇ.100 ರಷ್ಟು ಶೌಚಾಲಯಗಳ ನಿರ್ಮಾಣದ ಗುರಿ ಸಾಧಿಸಲು ರೂ.250.00 ಕೋಟಿ ವೆಚ್ಚದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ವ್ಯಾಪ್ತಿಯ ಶಾಲಾ/ಕಾಲೇಜುಗಳಲ್ಲಿ ಶೌಚಾಲಯ ನಿರ್ಮಾಣ ಕಾರ್ಯ ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಇಪಿ 254 ಯೋಸಕ 2022. ದಿ:23.08.2022ರ ಮೂಲಕ ಆದೇಶ ಹೊರಡಿಸಲಾಗಿದೆ<br>ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಸರ್ಕಾರಿ ಶಾಲೆಗಳಿಗೆ ಕಟ್ಟಡ, ಶೌಚಾಲಯ, ಉತ್ತಮ ಕಾಂಪೌಂಡ್ ಮತ್ತು ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಲು ಅಗತ್ಯ ಕ್ರಮ ವಹಿಸಲಾಗುತ್ತಿದೆ. |
| 2 | ರಾಜ್ಯದ ಹಲವಾರು ಶಾಲೆಗಳಲ್ಲಿ ಆಟದ ಮೈದಾನವೇ ಇಲ್ಲದಿರುವುದರಿಂದ ಆಗುತ್ತಿರುವ ಸಮಸ್ಯೆಗಳಿಗೆ ಯಾವ ಪರಿಹಾರ ಒದಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ; | • ರಾಜ್ಯದಲ್ಲಿ ಒಟ್ಟು 47283 ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಒಟ್ಟು 24349 ಶಾಲೆಗಳಲ್ಲಿ ಆಟದ ಮೈದಾನವಿದೆ.<br>• ಒಟ್ಟು 22934 ಶಾಲೆಗಳಲ್ಲಿ ಆಟದ ಮೈದಾನ ಇರುವುದಿಲ್ಲ.<br>• ಆಟದ ಮೈದಾನ ಇಲ್ಲದಿರುವ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರು ತಮ್ಮ ವಿದ್ಯಾರ್ಥಿಗಳಿಗೆ ಒಳಾಂಗಣ ಕ್ರೀಡೆಗಳಾದ |

| | | |
|---|---|---|
| | (ವಿವರಗಳನ್ನು ನೀಡುವುದು) | ಚೆಸ್, ಯೋಗಾಸನ, ಟೇಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಕುಸ್ತಿ, ಕರಾಟೆ, ಜುಡೋ, ಜಿಮ್ನಾಸ್ಟಿಕ್ಸ್ ಮುಂತಾದ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವಂತೆ ಕ್ರಮ ವಹಿಸಲಾಗಿದೆ.<br>• ವಿವಿಧ ಹಂತದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಹತ್ತಿರದ ತಾಲ್ಲೂಕು, ಜಿಲ್ಲಾ ಕ್ರೀಡಾಂಗಣ ಹಾಗೂ ನಗರಸಭೆ, ಪುರಸಭೆ ಹಾಗೂ ಮಹಾನಗರ ಪಾಲಿಕೆ ಆಟದ ಮೈದಾನಗಳಲ್ಲಿ ತರಬೇತಿ ನೀಡಿ ಕ್ರೀಡಾಕೂಟಗಳಿಗೆ ವಿದ್ಯಾರ್ಥಿಗಳನ್ನು ಕಳುಹಿಸಲಾಗುತ್ತದೆ.<br>• ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಶಾಸನಬದ್ಧ ಅನುದಾನದಲ್ಲಿ ಶೇ.2ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಮೈದಾನಗಳ ಅಭಿವೃದ್ದಿಗೆ ನೀಡಲಾಗುತ್ತಿದೆ ಹಾಗೂ ಪುರಸಭೆ ಹಾಗೂ ನಗರಸಭೆ ಶಾಸನಬದ್ಧ ಅನುದಾನದಲ್ಲಿ ಶೇ.1ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಚಟುವಟಿಕೆಗಳಿಗೆ ನೀಡಲಾಗುತ್ತಿದೆ.<br>• ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಪ್ರತಿ ವರ್ಷ ಜಿಲ್ಲಾವಾರು ಆಯ್ದ ಶಾಲೆಗಳಿಗೆ ಮೈದಾನಗಳ ಅಭಿವೃದ್ದಿಗೆ ಅನುದಾನವನ್ನು ನೀಡಲಾಗುತ್ತಿದೆ.<br>• 2020–21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ಮನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಠಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ.2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br>• 2021–22ನೇ ಸಾಲಿನಿಂದ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಎನ್‌ಆರ್‌ಇಜಿ ಅಡಿಯಲ್ಲಿ ಮೈದಾನಗಳ ಅಭಿವೃದ್ಧಿ ಪಡಿಸುವುದಕ್ಕೆ ಅನುದಾನ ಒದಗಿಸುತ್ತಿದೆ.<br>• ಮುಂದುವರೆದು ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ರ ಮೂಲಕ ಸುತ್ತೋಲೆ ಹೊರಡಿಸಲಾಗಿದೆ. |

| | | |
|---|---|---|
| | | • ಅನುದಾನದ ಲಭ್ಯತೆ ಆಧರಿಸಿ ನರೇಗಾ ಯೋಜನೆಯ ಮೂಲಕ ಹಂತ ಹಂತವಾಗಿ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಆಟದ ಮೈದಾನದ ಸೌಲಭ್ಯ ಒದಗಿಸಲು ಅಗತ್ಯಕ್ರಮವಹಿಸಲಾಗಿದೆ. |
| 3 | ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಎಷ್ಟು ಅನುದಾನ ಒದಗಿಸಲಾಗಿದೆ?(ವರ್ಷವಾರು, ಸೌಕರ್ಯವಾರು ಮಾಹಿತಿ ಒದಗಿಸುವುದು) | **2017-18 ರಿಂದ 2021-22 ರ ಸಾಲಿನವರೆಗೆ ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ ಸರ್ಕಾರಿ ಶಾಲೆಗಳ ಕೊಠಡಿ ನಿರ್ಮಾಣ ಹಾಗೂ ದುರಸ್ಥಿಗೆ ಅನುದಾನ ಬಿಡುಗಡೆ ಮಾಡಿರುವ ವಿವರ ಈ ಕೆಳಕಂಡಂತಿದೆ:** |

**ಪ್ರಾಥಮಿಕ ಶಾಲೆ**

ನಿರ್ಮಾಣ

| ಕ್ರಸಂ | ವರ್ಷ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2017-18 | 3981.00 |
| 2 | 2018-19 | 996.40 |
| 3 | 2019-20 | 6500.00 |
| 4 | 2020-21 | 11000.00 |
| 5 | 2021-22 | - |

ದುರಸ್ಥಿ

| ಕ್ರಸಂ | ವರ್ಷ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2017-18 | 2828.00 |
| 2 | 2018-19 | 2487.65 |
| 3 | 2019-20 | 2103.00 |
| 4 | 2020-21 | 405.11 |
| 5 | 2021-22 | 2463.23 |

**ಪ್ರೌಢಶಾಲೆ**

ನಿರ್ಮಾಣ

| ಕ್ರಸಂ | ವರ್ಷ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2017-18 | 3599.00 |
| 2 | 2018-19 | 6426.00 |
| 3 | 2019-20 | 2500.00 |
| 4 | 2020-21 | 7000.00 |
| 5 | 2021-22 | - |

ದುರಸ್ಥಿ

| ಕ್ರಸಂ | ವರ್ಷ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | 2017-18 | 3500.00 |
| 2 | 2018-19 | 1989.44 |
| 3 | 2019-20 | 1578.00 |
| 4 | 2020-21 | 786.00 |
| 5 | 2021-22 | 467.80 |

| | | |
|---|---|---|
| | | ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ 2021-22 ನೇ ಸಾಲಿನಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಪ್ರತಿ ಸರ್ಕಾರಿ ಶಾಲೆಗೆ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರ/ಎಸ್.ಡಿ.ಎಂ.ಸಿ ಜಂಟಿ ಖಾತೆಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. |

**2018–19:**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 3000/- | 636.75 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 4000/- | 899.48 |
| ಸರ್ಕಾರಿ ಪ್ರೌಢ ಶಾಲೆಗಳು | 4300/- | 201.28 |
| **ಒಟ್ಟು** | -- | **1737.51** |

**2019–20:**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 4525/- | 950.65 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 5700/- | 1250.13 |
| ಸರ್ಕಾರಿ ಪ್ರೌಢ ಶಾಲೆಗಳು | 6370/- | 299.20 |
| **ಒಟ್ಟು** | -- | **2499.98** |

**2020–21:**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 5400/- | 1122.93 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 6790/- | 1527.07 |
| ಸರ್ಕಾರಿ ಪ್ರೌಢ ಶಾಲೆಗಳು | 7400/- | 349.80 |
| **ಒಟ್ಟು** | -- | **2999.80** |

**2021-22:**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | **4650/-** | **967.00** |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | **5400/-** | **1214.00** |
| ಸರ್ಕಾರಿ ಪ್ರೌಢ ಶಾಲೆಗಳು | **6750/-** | **319.00** |
| ಒಟ್ಟು | --- | **2500.00** |

**2022-23:**

| ಕ್ರ ಸಂ | ಶಾಲೆಗಳ ವಿವರ | ಶಾಲೆಗಳ ಸಂಖ್ಯೆ | ತಲಾ ನಿರ್ವಹಣಾ ವೆಚ್ಚ ರೂಗಳಲ್ಲಿ | ನಿಗದಿಪಡಿಸಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|---|
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 20747 | 6350 | 3500 |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 21906 | 8000 | |
| 3 | ಸರ್ಕಾರಿ ಪ್ರೌಢ ಶಾಲೆಗಳು | 4729 | 9000 | |
| ಒಟ್ಟು | | 47382 | --- | |

**ಇಪಿ:264 ಯೋಸಕ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು